# Akashvani : Bangalore
# National Bulletin In Kannada
# 18.12.2024 / 7.35 am

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**18.12.2024 / 7.35 am**

**<><*<><>*><>**

ಮುಖ್ಯಾಂಶಗಳು

೧. ಭಾರತದ ಮೊದಲ ಕೀಟನಾಶಕ ವಿರೋಧಿ ಬಾಡಿಸೂಟ್ 'ಕಿಸಾನ್ ಕವಚ್' ಲೋಕಾರ್ಪಣೆ ಮಾಡಿದ ಕೇಂದ್ರ ಸಚಿವ ಡಾ.ಜಿತೇಂದ್ರ ಸಿಂಗ್

೨. ಭಾರತ ವಿಶ್ವದ ನವೀಕರಿಸಬಹುದಾದ ಇಂಧನ ಕೇಂದ್ರ- ಇಂಧನ ಸಚಿವ ಪ್ರಲ್ಹಾದ್ ಜೋಶಿ

೩. ಬೀಜಿಂಗ್‌ನಲ್ಲಿಂದು ಭಾರತ-ಚೀನಾ ವಿಶೇಷ ಪ್ರತಿನಿಧಿಗಳ ಮಾತುಕತೆ; ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಭಾಗಿ

೪. ಬಾರ್ಡರ್ ಗವಾಸ್ಕರ್ ಟ್ರೋಫಿ; ಫಾಲೊ ಆನ್ ತಪ್ಪಿಸಿಕೊಂಡ ಭಾರತ

**<><*<><>*><>**

ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ.ಜಿತೇಂದ್ರ ಸಿಂಗ್ ನಿನ್ನೆ ನವದೆಹಲಿಯಲ್ಲಿ ಭಾರತದ ಮೊದಲ ಕೀಟನಾಶಕ ವಿರೋಧಿ ಬಾಡಿಸೂಟ್ ಕಿಸಾನ್ ಕವಾಚ್ ಅನ್ನು ಬಿಡುಗಡೆ ಮಾಡಿದರು. ಕೀಟನಾಶಕ ಒಡ್ಡುವಿಕೆಯ ಹಾನಿಕಾರಕ ಪರಿಣಾಮಗಳಿಂದ ರೈತರನ್ನು ರಕ್ಷಿಸಲು ಈ ಬಾಡಿಸೂಟ್ ಅನ್ನು ವಿನ್ಯಾಸಗೊಳಿಸಲಾಗಿದೆ. ತೊಳೆಯಬಹುದಾದ ಈ ಸೂಟ್ ಕೀಟನಾಶಕ-ಪ್ರೇರಿತ ವಿಷತ್ವದ ವಿರುದ್ಧ ರಕ್ಷಣೆ ನೀಡುತ್ತದೆ, ಕೀಟನಾಶಕಗಳು ಉಸಿರಾಟದ ಅಸ್ವಸ್ಥತೆಗಳು ಮತ್ತು ದೃಷ್ಟಿ ನಷ್ಟ ಸೇರಿದಂತೆ ತೀವ್ರ ಆರೋಗ್ಯ ತೊಡಕುಗಳಿಗೆ ಕಾರಣವಾಗುತ್ತದೆ. ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ರೈತರ ಸುರಕ್ಷತೆಯಲ್ಲಿನ ನಿರ್ಣಾಯಕ ಅಂತರವನ್ನು ಪರಿಹರಿಸಲು ಕಿಸಾನ್ ಕವಚವು ಒಂದು ಅದ್ಭುತ ಪರಿಹಾರವಾಗಿದೆ ಎಂದು ಹೇಳಿದರು. ಕಿಸಾನ್ ಕವಚ್‌ನಂತಹ ಉಪಕ್ರಮಗಳೊಂದಿಗೆ ಸರ್ಕಾರವು ರೈತರನ್ನು ರಕ್ಷಿಸುವುದಲ್ಲದೆ ಹವಾಮಾನ-ನಿರೋಧಕ ಕೃಷಿ ಮತ್ತು ಸುಸ್ಥಿರ ಅಭಿವೃದ್ಧಿಯತ್ತ ಮುನ್ನಡೆಯುತ್ತಿದೆ ಎಂದು ಅವರು ಹೇಳಿದರು. ಕಾರ್ಯಕ್ರಮದಲ್ಲಿ ರೈತರಿಗೆ ಮೊದಲ ಹಂತದ ಕಿಸಾನ್ ಕವಚ್ ಸೂಟ್‌ಗಳನ್ನು ವಿತರಿಸಲಾಯಿತು.

ಧ್ವನಿ: ಜಿತೇಂದ್ರ ಸಿಂಗ್

**<><*<><>*><>**

ಭಾರತವು ಇಂಧನ ಕ್ರಾಂತಿಗೆ ಸಾಕ್ಷಿಯಾಗುತ್ತಿದ್ದು, ವಿಶ್ವದ ನವೀಕರಿಸಬಹುದಾದ ಇಂಧನ ಕೇಂದ್ರವಾಗುತ್ತಿದೆ ಎಂದು ನೂತನ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ನಡೆದ ೫ನೇ ಸಿಐಐ ಅಂತರಾಷ್ಟ್ರೀಯ ಇಂಧನ ಸಮ್ಮೇಳನ ಮತ್ತು ಪ್ರದರ್ಶನವನ್ನು ಉದ್ದೇಶಿಸಿ ಮಾತನಾಡಿದ ಸಚಿವರು, ಭಾರತ, ಪ್ರಸ್ತುತ ಶುದ್ಧ ಇಂಧನ ಕ್ಷೇತ್ರದಲ್ಲಿ ವಿಶ್ವದ ಅತ್ಯಂತ ಭರವಸೆಯ ರಾಷ್ಟ್ರಗಳಲ್ಲಿ ಒಂದಾಗಿದೆ. ೨೦೩೦ ರ ವೇಳೆಗೆ ೫೦೦ ಗಿಗಾವ್ಯಾಟ್ ಪಳೆಯುಳಿಕೆ ರಹಿತ ಇಂಧನ ಆಧಾರಿತ ಸಾಮರ್ಥ್ಯವನ್ನು ಸಾಧಿಸಲು ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದರು.

**<><*<><>*><>**

ಸರ್ಕಾರ ಒಂದು ರಾಷ್ಟ್ರದ ಒಂದು ಚುನಾವಣೆ ಮಸೂದೆಗಳನ್ನು ವ್ಯಾಪಕ ಸಮಾಲೋಚನೆಗಳಿಗಾಗಿ ಜಂಟಿ ಸಂಸದೀಯ ಸಮಿತಿ - ಜೆಪಿಸಿಗೆ ಉಲ್ಲೇಖಿಸಿದೆ. ಪ್ರತಿ ಹಂತದಲ್ಲೂ ಈ ಕುರಿತು ವಿಸ್ತೃತ ಚರ್ಚೆ ನಡೆಯಬೇಕಿರುವುದರಿಂದ ಮಸೂದೆಯನ್ನು ಜೆಪಿಸಿಗೆ ಕಳುಹಿಸಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಅವರೇ ಸೂಚಿಸಿದ್ದಾರೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಲೋಕಸಭೆಗೆ ತಿಳಿಸಿದರು. ಕೇಂದ್ರ ಕಾನೂನು ಸಚಿವ ಅರ್ಜುನ್ ರಾಮ್ ಮೇಘವಾಲ್ ಅವರು ಏಕಕಾಲದಲ್ಲಿ ಚುನಾವಣೆ ನಡೆಸಲು ಸಂವಿಧಾನ ೧೨೯ನೇ ತಿದ್ದುಪಡಿ ಮಸೂದೆ, ೨೦೨೪ ಮತ್ತು ಕೇಂದ್ರಾಡಳಿತ ಪ್ರದೇಶಗಳ ಕಾನೂನು ತಿದ್ದುಪಡಿ ಮಸೂದೆ ೨೦೨೪ ಅನ್ನು ಮಂಡಿಸುತ್ತಿದ್ದಂತೆ ಲೋಕಸಭೆಯಲ್ಲಿ ಗದ್ದಲದ ನಡುವೆಯೇ ಅಮಿತ್ ಶಾ ಅವರ ಹೇಳಿಕೆ ಹೊರಬಿದ್ದಿದೆ. ಲೋಕಸಭೆಯಲ್ಲಿ ಮಸೂದೆಗಳನ್ನು ಮಂಡಿಸಿದ ಕೂಡಲೇ

ವಿರೋಧ ಪಕ್ಷದ ನಾಯಕರು ಮಸೂದೆಗೆ ತಮ್ಮ ಆಕ್ಷೇಪಣೆಗಳನ್ನು ವ್ಯಕ್ತಪಡಿಸಿದರು. ಸಂಸತ್ತಿನ ಕೆಳಮನೆಯಲ್ಲಿ ಮಸೂದೆಗಳನ್ನು ಮಂಡಿಸುವಾಗ, ಸಚಿವ ಮೇಘವಾಲ್ ಅವರು ಒಂದು ರಾಷ್ಟ್ರ ಒಂದು ಚುನಾವಣೆಗೆ ಸಂಬಂಧಿಸಿದ ಮಸೂದೆಗಳನ್ನು ಜೆಪಿಸಿಗೆ ಕಳುಹಿಸಲು ಸರ್ಕಾರ ಸಿದ್ಧವಾಗಿದೆ ಎಂದು ಹೇಳಿದರು. ಎರಡು ಮಸೂದೆಗಳು ದೇಶದಲ್ಲಿ ಲೋಕಸಭೆ ಮತ್ತು ರಾಜ್ಯ ವಿಧಾನಸಭೆ ಚುನಾವಣೆಗಳನ್ನು ಏಕಕಾಲದಲ್ಲಿ ನಡೆಸುವ ಗುರಿಯನ್ನು ಹೊಂದಿವೆ. ಜೆಪಿಸಿ ಎನ್ನುವುದು ಒಂದು ನಿರ್ದಿಷ್ಟ ವಿಷಯ ಅಥವಾ ಮಸೂದೆಯ ಸಂಪೂರ್ಣ ಪರೀಕ್ಷೆಯನ್ನು ನಡೆಸಲು ಸಂಸತ್ತು ಸ್ಥಾಪಿಸಿದ ತಾತ್ಕಾಲಿಕ ಸಮಿತಿಯಾಗಿದೆ. ಇದು ಎರಡೂ ಸದನಗಳು ಮತ್ತು ಆಡಳಿತ ಮತ್ತು ವಿರೋಧ ಪಕ್ಷಗಳ ಸದಸ್ಯರನ್ನು ಒಳಗೊಂಡಿದೆ.

**<><*<><>*><>**

ಜೈಪುರದಲ್ಲಿ ನಿನ್ನೆ ಪ್ರಸ್ತುತ ರಾಜಸ್ಥಾನ ಸರ್ಕಾರ ಒಂದು ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಿದರು. ಈ ಸಂದರ್ಭದಲ್ಲಿ ಅವರು ೪೬ ಸಾವಿರದ ೩೦೦ ಕೋಟಿ ರೂಪಾಯಿ ಮೌಲ್ಯದ ಇಂಧನ, ರಸ್ತೆ, ರೈಲ್ವೆ ಮತ್ತು ನೀರಾವರಿಗೆ ಸಂಬಂಧಿಸಿದ ೨೪ ಯೋಜನೆಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಿದರು.

**<><*<><>*><>**

೧೫ನೇ ಹಣಕಾಸು ಆಯೋಗದ ಶಿಫಾರಸ್ಸಿನಡಿಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಪಂಚಾಯತ್ ರಾಜ್ ಇಲಾಖೆಯಿಂದ ಗ್ರಾಮೀಣ ಸ್ಥಳೀಯ ಸಂಸ್ಥೆಗಳಿಗೆ ೧.೪೩ ಲಕ್ಷ ಕೋಟಿ ರೂಪಾಯಿ ಅನುದಾನ ಬಿಡುಗಡೆಗೊಳಿಸಲಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಲೋಕಸಭೆಯಲ್ಲಿ ನಿನ್ನೆ ಲಿಖಿತ ಉತ್ತರ ನೀಡಿದ ಪಂಚಾಯತ್ ರಾಜ್ ಖಾತೆ ರಾಜ್ಯ ಸಚಿವ ಪ್ರೊಫೆಸರ್ ಎಸ್.ಪಿ.ಸಿಂಗ್ ಬಘೇಲ್, ಈವರೆಗೆ ಇತ್ತೀಚಿಗೆ ದೊರೆತ ಮಾಹಿತಿಯಂತೆ ಮೀಸಲಿಟ್ಟಿರುವ ಅನುದಾನದಲ್ಲಿ ಈಗಾಗಲೇ ೧.೦೬ ಲಕ್ಷ ಕೋಟಿ ರೂಪಾಯಿಯನ್ನು ರಾಜ್ಯಗಳು ಬಳಿಸಿಕೊಂಡಿವೆ ಎಂದು ತಿಳಿಸಿದ್ದಾರೆ.

**<><*<><>*><>**

ಇಂದು ಬೀಜಿಂಗ್‌ನಲ್ಲಿ ನಡೆಯಲಿರುವ ಭಾರತ-ಚೀನಾ ವಿಶೇಷ ಪ್ರತಿನಿಧಿಗಳ ಮಾತುಕತೆಯಲ್ಲಿ ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಭಾಗವಹಿಸಲಿದ್ದಾರೆ. ಪೂರ್ವ ಲಡಾಖ್‌ನಲ್ಲಿನ ಮಿಲಿಟರಿ ಬಿಕ್ಕಟ್ಟಿನಿಂದಾಗಿ ದ್ವಿಪಕ್ಷೀಯ ಸಂಬಂಧಗಳನ್ನು ಮರುಸ್ಥಾಪಿಸುವ ಉದ್ದೇಶದಿಂದ ಮಾತುಕತೆಗಳು ನಾಲ್ಕು ವರ್ಷಗಳಿಂದ ಸ್ಥಗಿತಗೊಂಡಿವೆ. ದೋವಲ್ ಅವರು ತಮ್ಮ ಚೀನೀ ಸಹವರ್ತಿ ಮತ್ತು ವಿದೇಶಾಂಗ ಸಚಿವ ವಾಂಗ್ ಯಿ ಅವರೊಂದಿಗೆ ವಿಶೇಷ ಪ್ರತಿನಿಧಿಗಳ ಮಾತುಕತೆಗಳ ೨೩ನೇ ಸುತ್ತಿನ ಸಭೆಯಲ್ಲಿ ಭಾಗವಹಿಸಲಿದ್ದಾರೆ. ಉಭಯ ದೇಶಗಳ ನಡುವೆ ಪೂರ್ವ ಲಡಾಖ್‌ನಲ್ಲಿ ೨೦೨೧ರ ಅಕ್ಟೋಬರ್ ಒಪ್ಪಂದ ಮತ್ತು ಗಸ್ತು ತಿರುಗುವಿಕೆಯ ನಂತರ ದ್ವಿಪಕ್ಷೀಯ ಸಂಬಂಧಗಳನ್ನು ಪುನರ್ನಿರ್ಮಿಸುವುದು ಸೇರಿ ಹಲವು ವಿಷಯಗಳ ಬಗ್ಗೆ ಅವರು ಚರ್ಚಿಸುವ ನಿರೀಕ್ಷೆಯಿದೆ. ಇದಕ್ಕೂ ಮೊದಲು ಈ ವರ್ಷ ಅಕ್ಟೋಬರ್‌ನಲ್ಲಿ ಬ್ರಿಕ್ಸ್ ಶೃಂಗಸಭೆಯ ಹಿನ್ನೆಲೆಯಲ್ಲಿ ರಷ್ಯಾದ ಕಜಾನ್‌ನಲ್ಲಿ ನಡೆದ ಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ನಡುವೆ ನಡೆದ ಸಭೆಯಲ್ಲಿ, ಸಾಮಾನ್ಯ ತಿಳಿವಳಿಕೆಗಳ ಆಧಾರದ ಮೇಲೆ ಬದ್ಧತೆಗಳನ್ನು ಕಾರ್ಯಗತಗೊಳಿಸಲು ಭಾರತದೊಂದಿಗೆ ಕೆಲಸ ಮಾಡಲು ಸಿದ್ಧ ಎಂದು ಚೀನಾ ಹೇಳಿದೆ.

**<><*<><>*><>**

ರಾಜ್ಯಸಭೆಯಲ್ಲಿ ನಿನ್ನೆ ಭಾರತ ಸಂವಿಧಾನದ ೭೫ ವರ್ಷಗಳ ವೈಭವೋಪೇತ ಪಯಣದ ಕುರಿತು ಎರಡನೇ ದಿನದ ವಿಶೇಷ ಚರ್ಚೆ ಮುಂದುವರೆಯಿತು. ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದ ಕೇಂದ್ರ ಗೃಹ ಸಚಿವ ಅಮಿತ್ ಶಾ, ಭಾರತೀಯ ಸಂವಿಧಾನದಿಂದಲೇ ದೇಶ ತೀವ್ರಗತಿಯ ಪ್ರಗತಿ ಕಾಣುತ್ತಿದೆ. ನಮ್ಮ ಸಂವಿಧಾನದ ಮೂಲಭೂತ ತತ್ವಗಳಿಂದಾಗಿ ೭೫ ವರ್ಷಗಳಲ್ಲಿ ಪ್ರಜಾಪ್ರಭುತ್ವ ಭಾರತದಲ್ಲಿ ಸುಭದ್ರವಾಗಿ ನೆಲೆಯೂರಿದೆ. ಹಾಗೆಯೇ ಸಂವಿಧಾನದ ಚೌಕಟ್ಟನ್ನು ಮೀರಿ ಅದನ್ನು ಉಲ್ಲಂಘಿಸಲು ಪ್ರಯತ್ನಿಸಿದ್ದಲ್ಲಿ ಆಗುವಂತಹ ಅನಾಹುತಗಳನ್ನು ದೇಶ ಕಂಡಿದೆ ಎಂದರು. ಇದಕ್ಕೂ ಮುನ್ನ ಸಭಾನಾಯಕ ಮತ್ತು ಕೇಂದ್ರ ಸಚಿವ ಜಗತ್ ಪ್ರಕಾಶ್ ನಡ್ಡಾ, ಭಾರತವು ಕೇವಲ ಅತಿದೊಡ್ಡ ಪ್ರಜಾಪ್ರಭುತ್ವವಲ್ಲ, ಆದರೆ ಪ್ರಜಾಪ್ರಭುತ್ವದ ತಾಯಿ. ಭಾರತೀಯ ತತ್ವದ ಪ್ರಕಾರ, ಪ್ರಜಾಪ್ರಭುತ್ವವು ಸ್ವಾತಂತ್ರ್ಯ, ಸ್ವೀಕಾರಾರ್ಹತೆ, ಸಮಾನತೆ ಮತ್ತು ಒಳಗೊಳ್ಳುವಿಕೆಯನ್ನು ಒಳಗೊಂಡಿರುತ್ತದೆ ಎಂದರು. ಜೆಡಿಯು ನಾಯಕ ಮತ್ತು ಕೇಂದ್ರ ಸಚಿವ ರಾಮ್ ನಾಥ್ ಠಾಕೂರ್ ಅವರು ಪ್ರತಿಪಕ್ಷ ಕಾಂಗ್ರೆಸ್, ತುರ್ತು ಪರಿಸ್ಥಿತಿಯನ್ನು ಹೇರಿ ಸಂವಿಧಾನದ ಮೇಲೆ ದಾಳಿ ನಡೆಸಿತ್ತು ಎಂದರು.

**<><*<><>*><>**

ಕರಾವಳಿ ಪೊಲೀಸ್ ಪಡೆಯ ತರಬೇತಿ ಸಾಮರ್ಥ್ಯ ವೃದ್ಧಿ ಹಾಗೂ ಆಧುನೀಕರಣಕ್ಕಾಗಿ ಕೇಂದ್ರ ಸರ್ಕಾರ ಹಲವಾರು ಕ್ರಮ ಕೈಗೊಂಡಿದೆ ಎಂದು ಗೃಹ ಖಾತೆ ರಾಜ್ಯ ಸಚಿವ ನಿತ್ಯಾನಂದ ರೈ ತಿಳಿಸಿದ್ದಾರೆ. ಲೋಕಸಭೆಯಲ್ಲಿ ನಿನ್ನೆ

ಪ್ರಶ್ನೆಯೊಂದಕ್ಕೆ ಉತ್ತರಿಸಿದ ಅವರು, ಕರಾವಳಿಯಲ್ಲಿ ಎದುರಾಗುವ ಭದ್ರತಾ ಸಮಸ್ಯೆಗಳನ್ನು ಸಮರ್ಥವಾಗಿ ಎದುರಿಸಲು ಕರಾವಳಿ ಭದ್ರತಾ ಯೋಜನೆ ಜಾರಿಗೊಳಿಸಲಾಗಿದ್ದು, ಇದರಡಿ ೨೦೪ ಕರಾವಳಿ ಪೊಲೀಸ್ ಠಾಣೆಗಳು ಕಾರ್ಯ ನಿರ್ವಹಿಸುತ್ತಿವೆ. ಇಲ್ಲಿಯವರೆಗೆ ಸುಮಾರು ೧೩ ಸಾವಿರದ ೮೭೯ ಕರಾವಳಿ ಪೊಲೀಸ್ ಸಿಬ್ಬಂದಿಗೆ ತರಬೇತಿ ನೀಡಲಾಗಿದೆ. ಇವರಿಗೆ ಭಾರತೀಯ ನೌಕಾದಳವೂ ಕೂಡ ತರಬೇತಿ ನೀಡುತ್ತಿದೆ ಎಂದು ತಿಳಿಸಿದರು.

**<><*<><>*><>**

ಆಸ್ಟ್ರೇಲಿಯಾದ ಬ್ರಿಸ್ಬೇನ್‌ನ ಗಬ್ಬಾದಲ್ಲಿ ನಡೆಯುತ್ತಿರುವ ಭಾರತ ಮತ್ತು ಆಸ್ಟ್ರೇಲಿಯಾ ನಡುವಿನ ಬಾರ್ಡರ್-ಗವಾಸ್ಕರ್ ಟ್ರೋಫಿಯ ಮೂರನೇ ಟೆಸ್ಟ್‌ನ ಅಂತಿಮ ದಿನವಾದ ಇಂದು ಭಾರತ ೯ ವಿಕೆಟ್‌ಗೆ ೨೫೨ ರನ್‌ಗಳೊಂದಿಗೆ ತನ್ನ ಮೊದಲ ಇನ್ನಿಂಗ್ಸ್ ಅನ್ನು ಪುನರಾರಂಭಿಸಲಿದೆ. ಇದಕ್ಕೂ ಮುನ್ನ ೪ನೇ ದಿನದಂದು ಜಸ್ಪ್ರೀತ್ ಬುಮ್ರಾ ಮತ್ತು ಆಕಾಶ್ ದೀಪ್ ನಡುವಿನ ಕೊನೆಯ ವಿಕೆಟ್ ಜೊತೆಯಾಟದ ನೆರವಿನಿಂದ ಭಾರತವು ಫಾಲೋ-ಆನ್ ಅನ್ನು ಸ್ವಲ್ಪದರಲ್ಲೇ ತಪ್ಪಿಸಿಕೊಂಡಿತು. ಆಸ್ಟ್ರೇಲಿಯಾದ ಪ್ಯಾಟ್ ಕಮ್ಮಿನ್ಸ್ ರೋಹಿತ್ ಶರ್ಮಾ ಮತ್ತು ರವೀಂದ್ರ ಜಡೇಜಾ ಸೇರಿದಂತೆ ೪ ವಿಕೆಟ್ ಪಡೆದರು, ಮಿಚೆಲ್ ಸ್ಟಾರ್ಕ್ ೩ ವಿಕೆಟ್ ಪಡೆದರು. ಭಾರತದ ಪರ ಕೆಎಲ್ ರಾಹುಲ್ ೮೪ ಮತ್ತು ರವೀಂದ್ರ ಜಡೇಜಾ ೭೭ ರನ್ ಗಳಿಸಿದರು.

**<><*<><>*><>**

ಇತ್ತೀಚಿಗೆ ಚೆಸ್‌ನಲ್ಲಿ ವಿಶ್ವ ಚಾಂಪಿಯನ್ ಆಗಿರುವ ಡಿ.ಗುಕೇಶ್ ಮುಂಬರುವ ಫಿಡೆ ವರ್ಲ್ಡ್ ರಾಪಿಡ್ ಮತ್ತು ಬ್ಲಿಟ್ಜ್ ಚಾಂಪಿಯನ್‌ಶಿಪ್‌ನಿಂದ ಹಿಂದೆ ಸರಿದಿದ್ದಾರೆ. ಆ ಸ್ಪರ್ಧೆಯಲ್ಲಿ  ಅರ್ಜುನ್ ಎರಿಗೈಸಿ ಮತ್ತು ಆರ್. ಪ್ರಗ್ನಾನಂದ ಭಾರತವನ್ನು ಪ್ರತಿನಿಧಿಸಲಿದ್ದಾರೆ ವಿಶ್ವದ ನಂ. ೧ ಆಟಗಾರ ಮ್ಯಾಗ್ನಸ್ ಕಾರ್ಲ್‌ಸೆನ್ ಹಾಗೂ ಸೂಪರ್-ಗ್ರ್ಯಾಂಡ್ ಮಾಸ್ಟರ್‌ಗಳಾದ ಫ್ಯಾಬಿಯಾನೊ ಕರುವಾನಾ, ಇಯಾನ್ ನೆಪೊಮ್ನಿಯಾಚ್ಚಿ ಮತ್ತು ಹಿಕಾರು ನಕಮುರಾ ಭಾಗವಹಿಸಲಿದ್ದಾರೆ. ಫಿಡೆ ವರ್ಲ್ಡ್ ರಾಪಿಡ್ ಮತ್ತು ಬ್ಲಿಟ್ಜ್ ಚಾಂಪಿಯನ್‌ಶಿಪ್‌ಗಳು ಡಿಸೆಂಬರ್ ೨೬ ರಿಂದ ೩೧ ರ ವರೆಗೆ ನ್ಯೂಯಾರ್ಕ್‌ನಲ್ಲಿ ನಡೆಯಲಿದೆ.

**<><*<><>*><>**

ಇಂದು ಸಂಜೆ ೫.೩೦ ಕ್ಕೆ ಆಕಾಶವಾಣಿ ಸುದ್ದಿ ವಿಭಾಗ ಸಿದ್ಧಪಡಿಸಿರುವ ವಿಶೇಷ ಸಂವಾದದಲ್ಲಿ ೮೭ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಆಯ್ಕೆಯಾಗಿರುವ ಖ್ಯಾತ ಸಾಹಿತಿಗಳು ಮತ್ತು ಜಾನಪದ ವಿದ್ವಾಂಸರಾದ ಗೊ.ರು.ಚನ್ನಬಸಪ್ಪ ಪಾಲ್ಗೊಳ್ಳಲಿದ್ದಾರೆ. ಹಿರಿಯ ಪತ್ರಕರ್ತರಾದ ನಾರಾಯಣ ಸ್ವಾಮಿ.ಬಿ.ಎಸ್.ಸಂದರ್ಶನ ನಡೆಸಿಕೊಡಲಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>**